# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರುನಾಡು ರಂಗ ಕಲಾವಿದರ ಒಕ್ಕೂಟ ಇವರಿಗೆ ನಿರಂತರ ನೂರ ಹದಿನಾಲ್ಕು ಗಂಟೆಗಳ ಕಲಾ ಪೌರಾಣಿಕ ನಾಟಕ ಪ್ರದರ್ಶನಕ್ಕೆ ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ: ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಪತ್ರ ಸಂಖ್ಯೆ:ಡಿಕೆಸಿ/33011/214/2019, ದಿನಾಂಕ.07-12-2019.

**ಪ್ರಸ್ತಾವನೆ:-**

ಕರುನಾಡು ರಂಗ ಕಲಾವಿದರ ಒಕ್ಕೂಟ, ಜೆ.ಪಿ.ನಗರ, ಬೆಂಗಳೂರು ಇವರ ವತಿಯಿಂದ ವ್ಯಾಸಭಾರತ ಕಥಾವಸ್ತುವನ್ನು ಆಧರಿಸಿ ಆದಿಯಿಂದ ಅಂತ್ಯದವರೆಗೆ ನಿರಂತರ ನೂರ ಹದಿನಾಲ್ಕು ಗಂಟೆಗಳ ಪೌರಾಣಿಕ ನಾಟಕವನ್ನು ಆರು ದಿನಗಳ ಕಾಲ ಬೆಂಗಳೂರಿನಲ್ಲಿ ಆಯೋಜಿಸಲು ಉದ್ದೇಶಿಸಿರುವ ಕಾರ್ಯಕ್ರಮಕ್ಕೆ ಧನಸಹಾಯ ರೂ.55.00ಲಕ್ಷ ನೀಡುವಂತೆ ಸಂಸ್ಥೆಯವರು ಕೋರಿರುವ ಹಿನ್ನೆಲೆಯಲ್ಲಿ, ಲೆಕ್ಕಶೀರ್ಷಿಕೆ 2205-00-102-4-31-059ಅಡಿ ಹೆಚ್ಚುವರಿ ಅನುದಾನ ಬಿಡುಗಡೆ ಮಾಡಿ ಆದೇಶ ಹೊರಡಿಸಲು ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರು ಮೇಲೆ ಓದಲಾದ ಪತ್ರದಲ್ಲಿ ಕೋರಿರುತ್ತಾರೆ.

ಮಾನ್ಯ ಇಲಾಖಾ ಸಚಿವರು ಕರುನಾಡು ರಂಗ ಕಲಾವಿದರ ಒಕ್ಕೂಟ ಇವರಿಗೆ ನಿರಂತರ ನೂರ ಹದಿನಾಲ್ಕು ಗಂಟೆಗಳ ಕಲಾ ಪೌರಾಣಿಕ ನಾಟಕ ಪ್ರದರ್ಶನ ಕಾರ್ಯಕ್ರಮಕ್ಕೆ ರೂ.2.00ಲಕ್ಷಗಳ ಅನುದಾನವನ್ನು ಮಂಜೂರು ಮಾಡಲು ಅನುಮೋದನೆ ನೀಡಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರಿ ಆದೇಶ ಸಂಖ್ಯೆ: ಕಸಂವಾ 330 ಕಸಧ 2018, ಬೆಂಗಳೂರು, ದಿನಾಂಕ:24-01-2020.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರುನಾಡು ರಂಗ ಕಲಾವಿದರ ಒಕ್ಕೂಟ ಇವರಿಗೆ ನಿರಂತರ ನೂರ ಹದಿನಾಲ್ಕು ಗಂಟೆಗಳ ಕಲಾ ಪೌರಾಣಿಕ ನಾಟಕ ಪ್ರದರ್ಶನ ಕಾರ್ಯಕ್ರಮಕ್ಕೆ ರೂ.2.00ಲಕ್ಷ (ರೂಪಾಯಿ ಎರಡು ಲಕ್ಷಗಳು ಮಾತ್ರ)ಗಳನ್ನು ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು, ಇವರ ಮುಖಾಂತರ ಸಂಬಂಧಿಸಿದವರಿಗೆ ಬಿಡುಗಡೆ ಮಾಡಲು ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಮಂಜೂರಾತಿ ನೀಡಿದೆ.

1. ಯಾವ ಉದ್ದೇಶಕ್ಕೆ ಅನುದಾನ ಬಿಡುಗಡೆ ಮಾಡಿದೆಯೋ ಅದೇ ಉದ್ದೇಶಕ್ಕೆ ಬಳಸತಕ್ಕದ್ದು.
2. ಬಿಡುಗಡೆ ಮಾಡಿರುವ ಅನುದಾನ ಸಮರ್ಪಕವಾಗಿ ಬಳಕೆಯಾದ ಬಗ್ಗೆ ಹಣ ಬಳಕೆ ಪ್ರಮಾಣಪತ್ರವನ್ನು ಒದಗಿಸುವುದು.

2) ಈ ವೆಚ್ಚವನ್ನು 2019-20ನೇ ಸಾಲಿನ ಲೆಕ್ಕಶೀರ್ಷಿಕೆ 2205-00-102-4-31-059 ರಡಿಯಲ್ಲಿ ಭರಿಸತಕ್ಕದ್ದು.

3) ಈ ಆದೇಶವನ್ನು ಆರ್ಥಿಕ ಇಲಾಖೆಯ ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2020, ದಿನಾಂಕ:13-01-2020ರಲ್ಲಿ ಇಲಾಖಾ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Malathi
24/1/20

(ಪಿ.ಎಸ್.ಮಾಲತಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ.
(ಸಂಸ್ಕೃತಿ)

24/1/20

ಗೆ:

1. ಮಹಾಲೇಖಪಾಲರು (ಎ&ಇ), (ಜಿ&ಎಸ್ ಎಸ್ ಎ), (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2. ನಿರ್ದೇಶಕರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಭವನ, ಬೆಂಗಳೂರು.
3. ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರ ಆಪ್ತಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
4. ಖಜಾನೆ ಅಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5. [illegible]